ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: 　　　　ದಿನಾಂಕ : DATE : 3/1/2021

# ಸದನದಲ್ಲಿ ಮೊಬೈಲ್ ನಿರ್ಬಂಧಕ್ಕೆ ಚರ್ಚಿಸಿ ಕ್ರಮ: ಪ್ರಾಣೇಶ್

ಚಿಕ್ಕಮಗಳೂರು: ವಿಧಾನಸಭೆ ಹಾಗೂ ವಿಧಾನ ಪರಿಷತ್ತು ಸಭಾಧ್ಯಕ್ಷರ ಜತೆ ಚರ್ಚಿಸಿ ಸದನಗಳಲ್ಲಿ ಮೊಬೈಲ್ ಬಳಕೆ ನಿರ್ಬಂಧಿಸುವ ಕುರಿತು ತೀರ್ಮಾನ ತೆಗೆದುಕೊಳ್ಳಲಾಗುವುದು ಎಂದು ನೂತನ ಉಪ ಸಭಾಪತಿ ಎಂ.ಕೆ.ಪ್ರಾಣೇಶ್ ಹೇಳಿದರು. ಇಲ್ಲಿ ಮಾತನಾಡಿದ ಅವರು, ಪ್ರಕಾಶ್ ಕೆ.ರಾಥೋಡ್ ಪರಿಷತ್‌ನಲ್ಲಿ ಮೊಬೈಲ್‌ನಲ್ಲಿ ಅಶ್ಲೀಲ ದೃಶ್ಯಗಳನ್ನು ವೀಕ್ಷಿಸುತ್ತಿರುವುದು ಮಾಧ್ಯಮಗಳಲ್ಲಿ ಗಮನಿಸಿದ್ದೇವೆ. ಈ ಬಗ್ಗೆ ಎರಡೂ ಸದನದ ಸಭಾಪತಿಗಳ ಜೊತೆ ಚರ್ಚಿಸುತ್ತೇವೆ. ಸದನ ನಡೆಯುವಾಗ ಮೊಬೈಲ್ ಬಳಸುವ ಅವಶ್ಯಕತೆ ಇರುವುದಿಲ್ಲ. ಅಷ್ಟಕ್ಕೂ ಸದನದೊಳಗೆ ಮೊಬೈಲ್ ಜಾಮರ್ ಅಳವಡಿಸಲಾಗಿರುತ್ತದೆ ಎಂದರು. ಸದನಕ್ಕೆ ಮೊಬೈಲ್ ಕೊಂಡೊಯ್ಯುವುದನ್ನು ನಿರ್ಬಂಧಿಸಲು ಅಡೆತಡೆ ಇಲ್ಲ ಎಂದರು.